ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21

ದಿನಾಂಕ:11.11.2020

## ಸುತ್ತೋಲೆ

ವಿಷಯ:2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳನ್ನು ನೋಂದಾಯಿಸಿಕೊಳ್ಳುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಪಪೂಶಿಇ/ಪರೀಕ್ಷೆ/ಖಾ.ಅ.ನೊ/2020-21 ದಿನಾಂಕ:09.10.2020

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳನ್ವಯ 2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳುವ ಅಭ್ಯರ್ಥಿಗಳಿಗೆ ಉಲ್ಲೇಖಿತ ಸುತ್ತೋಲೆಯಲ್ಲಿ ದಿನಾಂಕ 11/11/2020ರ ವರೆಗೂ ದಂಡಶುಲ್ಕವಿಲ್ಲದೆ ಅವಕಾಶ ನೀಡಲಾಗಿತ್ತು. ವಿವರಗಳು ಕೆಳಗಿನಂತಿದೆ.

| ಕ್ರ ಸ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಅರ್ಜಿಗಳನ್ನು Online ನಲ್ಲಿ ಭರ್ತಿ ಮಾಡಲು ಕೊನೆಯ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ದಂಡ ಶುಲ್ಕವಿಲ್ಲದೆ | 11/11/2020 | 12/11/2020 | 11/11/2020 | 12/11/2020 |
| 2. | ದಂಡ ಶುಲ್ಕದೊಂದಿಗೆ ರಜಾ ದಿನಗಳನ್ನು ಹೊರತು ಪಡಿಸಿ ಪರೀಕ್ಷಾ ಶುಲ್ಕದ ಜೊತೆಗೆ ದಿನವೊಂದಕ್ಕೆ ರೂ.50.00 ರಂತೆ ಗರಿಷ್ಠ ರೂ.500.00 | 12/11/2020 ರಿಂದ 26/11/2020 | 27/11/2020 | 26/11/2020 | 30/11/2020 |

ಆದರೆ 2020ರ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಉತ್ತೀರ್ಣ ಅಂಕಪಟ್ಟಿಗಳು ವಿದ್ಯಾರ್ಥಿಗಳಿಗೆ ಇನ್ನೂ ತಲುಪಿಲ್ಲವಾದ್ದರಿಂದ ಪೋಷಕರು ಹಾಗೂ ವಿದ್ಯಾರ್ಥಿಗಳ ಮನವಿಯ ಮೇರೆಗೆ ಖಾಸಗಿ ಅಭ್ಯರ್ಥಿಗಳಿಗೆ ನೋಂದಣಿ ಮಾಡಿಕೊಳ್ಳುವ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರ ಸ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಅರ್ಜಿಗಳನ್ನು Online ನಲ್ಲಿ ಭರ್ತಿ ಮಾಡಲು ಕೊನೆಯ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ದಂಡ ಶುಲ್ಕವಿಲ್ಲದೆ | 12/11/2020 ರಿಂದ 30/11/2020 | 01/12/2020 | 30/11/2020 | 02/12/2020 |
| 2. | ದಂಡ ಶುಲ್ಕದೊಂದಿಗೆ ರಜಾ ದಿನಗಳನ್ನು ಹೊರತು ಪಡಿಸಿ ಪರೀಕ್ಷಾ ಶುಲ್ಕದ ಜೊತೆಗೆ ದಿನವೊಂದಕ್ಕೆ ರೂ.50.00 ರಂತೆ ಗರಿಷ್ಠ ರೂ.500.00 | 01/12/2020 ರಿಂದ 12/12/2020 | 14/12/2020 | 12/12/2020 | 15/12/2020 |

ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರ ಪರವಾಗಿ
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. **ಪದವಿ ಪೂರ್ವ ಶಿಕ್ಷಣ ಇಲಾಖೆಯ** ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು **ಕಛೇರಿಯ** ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. **ಪದವಿ ಪೂರ್ವ ಶಿಕ್ಷಣ ಬೋಧಿಸುವ** ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ.
   (ವಿದ್ಯಾರ್ಥಿಗಳಿಗೆ **ಈ** ಕುರಿತು ಸೂಕ್ತ ನಿರ್ದೇಶನ ನೀಡಲು) ಪ್ರತಿಯನ್ನು ಕಾಲೇಜಿನ ಸೂಚನಾ ಫಲಕದಲ್ಲಿ ಅಂಟಿಸಲು ತಿಳಿಸಿದೆ.
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ
4. **ಗಣಕಶಾಖೆಗೆ**
5. ಇ–**ಆಡಳಿತ ಶಾಖೆ,** (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು). ಮತ್ತು ಎಲ್ಲಾ ಮಾಧ್ಯಮಗಳಲ್ಲಿ ಪ್ರಕಟವಾಗುವಂತೆ ಕ್ರಮ ಕೈಗೊಳ್ಳಲು
6. ಕಛೇರಿ ಪ್ರತಿ.